# ಮಹಾರಾಣಿ ಮಹಿಳಾ ವಾಣಿಜ್ಯ ಮತ್ತು ನಿರ್ವಹಣಾ ಕಾಲೇಜಿನಲ್ಲಿ ಸಾಂಸ್ಕೃತಿಕ ವೇದಿಕೆಯಿಂದ 'ಶಿಕ್ಷಕರ ದಿನಾಚರಣೆ' ಕಾರ್ಯಕ್ರಮ

ಶಿಕ್ಷಕರು ಮತ್ತು ವಿದ್ಯಾರ್ಥಿಗಳ ನಡುವೆ ಭಾವನಾತ್ಮಕ ಸಂಬಂಧ ಬೆಸೆದಾಗ ಮಾತ್ರ ಉತ್ತಮ ಸಮಾಜ ನಿರ್ಮಾಣ ಸಾಧ್ಯ ಎಂದು ಬೆಳಗಾವಿಯ ರಾಣಿ ಚೆನ್ನಮ್ಮ ವಿಶ್ವವಿದ್ಯಾನಿಲಯದ ವಿಶ್ರಾಂತ ಕುಲಪತಿ ಬಿ.ಆರ್.ಅನಂತನ್ ಅಭಿಪ್ರಾಯಪಟ್ಟರು.



ಮಹಾರಾಣಿ ಮಹಿಳಾ ವಾಣಿಜ್ಯ ಮತ್ತು ನಿರ್ವಹಣಾ ಕಾಲೇಜಿನಲ್ಲಿ ಸಾಂಸ್ಕೃತಿಕ ವೇದಿಕೆಯಿಂದ ಹಮ್ಮಿಕೊಂಡಿದ್ದ 'ಶಿಕ್ಷಕರ ದಿನಾಚರಣೆ' ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಇತ್ತೀಚಿನ ದಿನಗಳಲ್ಲಿ ವಿದ್ಯಾರ್ಥಿಗಳಿಗೆ ಗುರುವಿನ ಬಗ್ಗೆ ಗೌರವ ಕಡಿಮೆಯಾಗುತ್ತಿರುವುದು ಬೇಸರದ ಸಂಗತಿ ಎಂದರು.

ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ಮಾಡುವ ಮಹತ್ವರ ಜವಾಬ್ದಾರಿ ಗುರುವಿನ ಮೇಲಿದೆ. ಹಾಗಾಗಿ ಗುರುಗಳ ಬಗ್ಗೆ ವಿದ್ಯಾರ್ಥಿ ಸಮುದಾಯ ಗೌರವ ಭಾವನೆ ಬೆಳೆಸಿಕೊಳ್ಳಬೇಕು. ಗುರುಗಳಿಗೆ ವಿದ್ಯಾರ್ಥಿಗಳ ಬಗ್ಗೆ ಭಯವಿರಬೇಕು, ವಿದ್ಯಾರ್ಥಿಗಳಿಗೆ ಗುರುಗಳ ಬಗ್ಗೆ ಭಕ್ತಿಯಿರಬೇಕು. ಆದರೆ ಇತ್ತೀಚೆಗೆ ವಿದ್ಯಾರ್ಥಿಗಳನ್ನು ಕಂಡರೆ ಗುರುಗಳೇ ಭಯಪಡುವಂತಾಗಿದೆ ಎಂದು ಹೇಳಿದರು.

ವಿದ್ಯಾರ್ಥಿಗಳು ವಿದ್ಯಾರ್ಜನೆ ಜೊತೆಗೆ ಕ್ರಿಯಾಶೀಲತೆ ರೂಢಿಸಿಕೊಳ್ಳಬೇಕು. ಎಲ್ಲ ಅವಕಾಶಗಳನ್ನು ತನ್ನದಾಗಿಸಿಕೊಳ್ಳಬೇಕು. ತಂತ್ರಜ್ಞಾನದ ಬಳಕೆ ವಿದ್ಯಾರ್ಥಿಗಳಲ್ಲಿ ಹೆಚ್ಚುತ್ತಿದೆ. ಬೇರೆ ಆಕರ್ಷಣೆಗಳಿಗೆ ಒಳಗಾಗುತ್ತಿರುವ ಯುವ ಸಮುದಾಯ ಮನಸ್ಸನ್ನು ಹತೋಟಿಯಲ್ಲಿಡದಿದ್ದರೆ ಅಪಾಯ ಎದುರಿಸಬೇಕಾಗುತ್ತದೆ ಎಂದು ಎಚ್ಚರಿಸಿದರು.

ಕಾಲೇಜಿನ ಪ್ರಾಂಶುಪಾಲ ಡಾ.ಅಣ್ಣೇಗೌಡ ಅಧ್ಯಕ್ಷತೆವಹಿಸಿ ಮಾತನಾಡಿ, ಕಾಲೇಜಿನ ವಿದ್ಯಾರ್ಥಿನಿಯರು ಶಿಕ್ಷಕರ ದಿನಾಚರಣೆ ಏರ್ಪಡಿಸುವ ಮೂಲಕ ತಮಗೆ ವಿದ್ಯೆ ಕಲಿಸಿದ ಗುರುಗಳನ್ನು ಗೌರವಿಸುತ್ತಿರುವುದು ಅರ್ಥಪೂರ್ಣವಾಗಿದೆ. ಈ ರೀತಿಯ ಚಟುವಟಿಕೆಗಳು ವಿದ್ಯಾರ್ಥಿ ಮತ್ತು ಗುರುಗಳ ನಡುವಿನ ಸಂಬಂಧವನ್ನು ಗಟ್ಟಿಗೊಳಿಸುತ್ತವೆ ಎಂದು ಹೇಳಿದರು.

ಸಾಂಸ್ಕೃತಿಕ ವೇದಿಕೆಯ ಕಾರ್ಯದರ್ಶಿ ಪ್ರೊ.ಪಿ.ಶಿವಣ್ಣ ಪ್ರಾಸ್ತಾವಿಕವಾಗಿ ಮಾತನಾಡಿ, ಕಾಲೇಜಿನಲ್ಲಿ ಸಾಹಿತ್ಯಕ ಮತ್ತು ಸಾಂಸ್ಕೃತಿಕ ಚಟುವಟಿಕೆಗಳನ್ನು ನಿರಂತರವಾಗಿ ಆಯೋಜಿಸುವ ಮೂಲಕ ವಿದ್ಯಾರ್ಥಿಗಳ

ಪ್ರಗತಿಗೆ ವೇದಿಕೆ ಕಲ್ಪಿಸಿಕೊಡಲಾಗುತ್ತಿದೆ. ವಿದ್ಯಾರ್ಥಿನಿಯರು ಶಿಕ್ಷಕರ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸುತ್ತಿರುವುದು ಸಂತಸದ ಸಂಗತಿ ಎಂದು ವಿವರಿಸಿದರು.

ಎಲ್ಲ ಸಮಿತಿಗಳ ಪ್ರಧಾನ ಸಂಯೋಜಕರಾದ ಪ್ರೊ.ಎಂ.ಶಿವಣ್ಣ, ಅಧ್ಯಾಪಕ ಸಂಘದ ಕಾರ್ಯದರ್ಶಿ ಪ್ರೊ.ಸೋಮಣ್ಣ, ವಿದ್ಯಾರ್ಥಿನಿ ಸಂಘದ ಅಧ್ಯಕ್ಷೆ ಕು.ಸೌಮ್ಯ ಕೆ, ಕಾರ್ಯದರ್ಶಿ ಕು.ಮೇಘನ ಸಿ.ಡಿ ಹಾಜರಿದ್ದರು. ಬಳಿಕ ವಿದ್ಯಾರ್ಥಿಗಳಿಂದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮ ನಡೆಸಿಕೊಡಲಾಯಿತು.